# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 432

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 16.02.2023

ಉತ್ತರಿಸುವ ಸಚಿವರು : ಮುಖ್ಯಮಂತ್ರಿ.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಸರ್ಕಾರ ರೂಪಿಸಿರುವ ನಿಯಮ/ಮಾನದಂಡಗಳೇನು; | ರಾಜ್ಯದಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿಯನ್ನು ಪ್ರಾರಂಭಿಸಲು ಈ ಕೆಳಕಂಡ ಸಂಘ ಸಂಸ್ಥೆಗಳು ಹಾಗೂ ಏಕ ವ್ಯಕ್ತಿಗಳಿಗೆ ಆದ್ಯತೆಯನ್ನು ನೀಡಲಾಗುತ್ತದೆ.<br>• ಸರ್ಕಾರದ ನಿಗಮಗಳು / ಗ್ರಾಮ ಪಂಚಾಯಿತಿ / ಸ್ಥಳೀಯ ನಗರ ಸಂಸ್ಥೆಗಳು<br>• ಸಹಕಾರ ಸಂಘಗಳು<br>• ಟಿ.ಎ.ಪಿ.ಸಿ.ಎಂ.ಎಸ್ / ಕೋ-ಆಪರೇಟಿವ ಮಾರ್ಕೆಟಿಂಗ್ ಸೊಸೈಟಿಗಳು<br>• ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು / ಪಿ.ಎಸ್.ಎಸ್.ಎನ್.<br>• ಹಾಪ್‌ಕಾಮ್ಸ್<br>• ಅಧಿಕೃತವಾಗಿ ನೋಂದಣಿಯಾದ ಸಹಕಾರ ಸಂಘಗಳು.<br>•ಅಧಿಕೃತವಾಗಿ ನೋಂದಣಿಯಾದ ಪ್ರಾಥಮಿಕ ಬಳಕೆದಾರರ ಸಹಕಾರ ಸಂಘಗಳು<br>• ನೋಂದಣಿಯಾದ ಆದಿವಾಸಿ ವಿವಿಧೋದ್ದೇಶ ಸಹಕಾರ ಸಂಘಗಳು<br>• ನೋಂದಣಿಯಾದ ನೇಕಾರರ ಸಹಕಾರ ಸಂಘಗಳು<br>• ನೋಂದಣಿಯಾದ ಮಹಿಳಾ ವಿವಿಧೋದ್ದೇಶ ಸಹಕಾರ ಸಂಘಗಳು<br>• ನೋಂದಣಿಯಾದ ವಿವಿಧೋದ್ದೇಶ ಸಹಕಾರ ಸಂಘಗಳು<br>• ಅಂಗವಿಕಲ ಕಲ್ಯಾಣ ಸಹಕಾರ ಸಂಘಗಳು<br>• ಸ್ತ್ರೀಶಕ್ತಿ ಗುಂಪುಗಳು ಮತ್ತು ಮಹಿಳಾ ಸ್ವಸಹಾಯ ಗುಂಪುಗಳು<br>• ಸಹಕಾರ ಸಂಘಗಳು ನಡೆಸುವ ಬ್ಯಾಂಕ್ ಅಥವಾ ಕೋ-ಆಪರೇಟಿವ್ ಬ್ಯಾಂಕ್‌ಗಳು.<br>➢ ಖಾಸಗಿ – ವಿಕಲ ಚೇತನರ ವರ್ಗ<br>• ವಿಕಲ ಚೇತನರ ವರ್ಗ (ಪ್ರಾರಂಭಿಕವಾಗಿ 400 ನ್ಯಾಯಬೆಲೆ ಅಂಗಡಿಗಳು)<br>• ಮಂಗಳ ಮುಖಿಯರ ವರ್ಗ (ಪ್ರಾರಂಭಿಕವಾಗಿ 30 ನ್ಯಾಯಬೆಲೆ ಅಂಗಡಿಗಳು) |

| | | |
|---|---|---|
| | | ಮೇಲ್ಕಂಡ ಸಹಕಾರ ಸಂಘಗಳ ಗುಣಮಟ್ಟವನ್ನು ಅವರಿಗೆ ನೀಡಲಾಗಿರುವ ಎ ಬಿ ಮತ್ತು ಸಿ ಶ್ರೇಣಿಯ ಆಡಿಟ್ ವರದಿಯನ್ನು ಪರಿಗಣಿಸಲಾಗುವುದು. ಸದರಿ ಸಹಕಾರ ಸಂಘಗಳು 03 ವರ್ಷಗಳಿಗಿಂತ ಹಿಂದಿನವುಗಳಾಗಿರಬೇಕು ಹಾಗೂ ಕಳೆದ 2 ವರ್ಷಗಳಿಂದ ನಿರಂತರವಾಗಿ ರೂ.2,00,000/-ದಷ್ಟು ಮೊತ್ತದ ಬ್ಯಾಂಕ್ ಬ್ಯಾಲೆನ್ಸ್ ಹೊಂದಿರಬೇಕು.<br>ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ (ನಿಯಂತ್ರಣ) ಆದೇಶ 2016 ರ ಕಲಂ 5 ರಂತೆ ನ್ಯಾಯಬೆಲೆ ಅಂಗಡಿ ನಡೆಸಲು ಎರಡು ಮಾಹೆಗಳ ಪಡಿತರ ಪದಾರ್ಥಗಳನ್ನು ಶೇಖರಿಸುವಷ್ಟು ಸ್ಥಳಾವಕಾಶವುಳ್ಳ ಸೂಕ್ತವಾದ ವ್ಯಾಪಾರ ಸ್ಥಳವನ್ನು ಹೊಂದಿರಬೇಕು ಮತ್ತು ಎರಡು ಮಾಹೆಗಳ ಪಡಿತರ ದಾಸ್ತಾನನ್ನು ಖರೀದಿಸಲು ಸಾಕಷ್ಟು ಮೊತ್ತವನ್ನು ಬ್ಯಾಂಕ್ ಖಾತೆಯಲ್ಲಿ ಹೊಂದಿರಬೇಕು ಎಂಬ ಷರತ್ತನ್ನು ಸಹ ವಿಧಿಸಲಾಗಿದೆ.<br>ಕರ್ನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ ನಿಯಂತ್ರಣ ಆದೇಶ 2016 ರ ಕಲಂ 11 ರಂತೆ ಪಟ್ಟಣ/ನಗರ ಪ್ರದೇಶಗಳಲ್ಲಿ 800 ಪಡಿತರ ಚೀಟಿಗಳನ್ನು ಗ್ರಾಮಾಂತರ ಪ್ರದೇಶಗಳಲ್ಲಿ ಕನಿಷ್ಠ 500 ಪಡಿತರ ಚೀಟಿಗಳನ್ನು ನಿಯೋಜಿಸಿ ಹೊಸ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಬಹುದು. ಆದರೆ ಬುಡಕಟ್ಟು ಹಾಡಿಗಳು/ ತಾಂಡಗಳು/ ಗೊಲ್ಲರಹಟ್ಟಿ ಇತ್ಯಾದಿಗಳಂತಹ ವಿಶೇಷ ಪ್ರದೇಶಗಳ ಅಗತ್ಯತೆಯನ್ನು ಪೂರೈಸುವ ಸಲುವಾಗಿ ಅಂತಹ ಗ್ರಾಮೀಣ ಪ್ರದೇಶಗಳಲ್ಲಿ 100 ಪಡಿತರ ಚೀಟಿಗಳನ್ನು ಪರಿಗಣಿಸಿ ನ್ಯಾಯಬೆಲೆ ಅಂಗಡಿಯನ್ನು ತೆರೆಯಲು ಅವಕಾಶ ಕಲ್ಪಿಸಲಾಗಿದೆ. |
| ಆ | ನ್ಯಾಯಬೆಲೆ ಅಂಗಡಿ ಹಂಚಿಕೆಯಲ್ಲಿ ಭಾರಿ ತಾರತಮ್ಯ ಮತ್ತು ಹೆಚ್ಚಿನ ಪ್ರಮಾಣದಲ್ಲಿ ಪಡಿತರ ಚೀಟಿ ವಿತರಣೆಯಿಂದ ಸಮಸ್ಯೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಇಲ್ಲ. |
| ಇ | 65 ವರ್ಷ ವಯೋಮಿತಿ ದಾಟಿರುವ ಮಾಲೀಕರ ನ್ಯಾಯಬೆಲೆ ಅಂಗಡಿಗಳ ಪರವಾನಗಿಯನ್ನು ರದ್ದುಪಡಿಸುವ ಪ್ರಕ್ರಿಯೆಯು ಯಾವ ಹಂತದಲ್ಲಿದೆ; | ಪ್ರಸ್ತುತ ಯಾವುದೇ ಪ್ರಕ್ರಿಯೆ ಜಾರಿಯಲ್ಲಿರುವುದಿಲ್ಲ. |

| | | |
|---|---|---|
| ಈ | ಕಲಬುರಗಿ ಜಿಲ್ಲೆ ಅಫಜಲಪೂರ ತಾಲ್ಲೂಕಿನ ವ್ಯಾಪ್ತಿಯಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳೆಷ್ಟು; 65 ವರ್ಷ ಮೀರಿದ ಮಾಲೀಕರ ನ್ಯಾಯಬೆಲೆ ಅಂಗಡಿಗಳೆಷ್ಟು; (ಗ್ರಾಮ ಪಂಚಾಯಿತಿವಾರು ಮಾಹಿತಿಯನ್ನು ನೀಡುವುದು) | 1. ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿ 99 ನ್ಯಾಯ ಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿವೆ.<br>2. ಇದರಲ್ಲಿ 65 ವರ್ಷ ವಯೋಮಿತಿ ಮೀರಿದ 13 ಜನ ನ್ಯಾಯ ಬೆಲೆ ಅಂಗಡಿ ವರ್ತಕರಿರುತ್ತಾರೆ.<br>3. ಗ್ರಾಮ ಪಂಚಾಯಿತಿವಾರು ವಿವರ: ತೆಲ್ಲೂರು ಪಂಚಾಯಿತಿ-02, ಕಲ್ಲೂರ-01, ರೇವೂರ-01, ಬಳೂರ್ಗಿ-01, ಮಲ್ಲಾಬಾದ- 01, ಬಂಕಲಗಾ-01, ಅತನೂರ-01, ಬಂದರವಾಡ-01, ಕರಜಗಿ-01, ನಂದರಗಾ-01, ಗೌರ (ಬಿ)-01, ರಾಮನಗರ-01. |
| ಉ | ಅಫಜಲಪೂರ ತಾಲ್ಲೂಕಿನ ಯಾವ ಯಾವ ಗ್ರಾಮ ಪಂಚಾಯಿತಿಗಳಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಅರ್ಜಿಯನ್ನು ಆಹ್ವಾನಿಸಲಾಗುವುದು? (ವಿವರ ನೀಡುವುದು) | ಅವಶ್ಯಕತೆಗೆ ಅನುಗುಣವಾಗಿ ತಹಶೀಲ್ದಾರರ ವರದಿ ಆಧಾರದ ಮೇಲೆ ಸಕ್ಷಮ ಪ್ರಾಧಿಕಾರಿಗಳಾದ ಜಂಟಿ / ಉಪ ನಿರ್ದೇಶಕರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಇವರ ಹಂತದಲ್ಲಿ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ (ನಿಯಂತ್ರಣ) ಆದೇಶ 2016 ರನ್ವಯ ಪ್ರಕಟಣೆಯನ್ನು ನೀಡಲು ಕ್ರಮವಹಿಸಲಾಗುತ್ತದೆ. |

ಆನಾಸ 13 ಆನಾಸ 2023 (ಇ-ಆಫೀಸ್)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ